# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಸುವರ್ಣ ಗ್ರಾಮೋದಯ ಯೋಜನೆಯ 5ನೇ ಹಂತದಡಿ ಧಾರವಾಡ ಜಿಲ್ಲೆಯ ನವಲಗುಂದ ತಾಲ್ಲೂಕಿನ ಗ್ರಾಮಗಳ ಆಯ್ಕೆ ಅನುಮೋದನೆ ಕುರಿತು.

ಓದಲಾಗಿದೆ: 1.ಸರ್ಕಾರಿ ಆದೇಶ ಸಂಖ್ಯೆ:ಗ್ರಾಅಪ:29:ಸುಗ್ರಾಯೋ:2012 ದಿ:29.06.2012
2.ಸರ್ಕಾರದ ಸುತ್ತೋಲೆ ಸಂಖ್ಯೆ:ಗ್ರಾಅಪ:29:ಸುಗ್ರಾಯೋ:2012 ದಿ:04.07.2012

**ಪ್ರಸ್ತಾವನೆ:**

2012–13ನೇ ಸಾಲಿನ ಐದನೇ ಹಂತದ ಸುವರ್ಣ ಗ್ರಾಮೋದಯ ಯೋಜನೆಯಡಿಯಲ್ಲಿ 1000 ಗ್ರಾಮಗಳನ್ನು ಆಯ್ಕೆ ಮಾಡಿ ಅಭಿವೃದ್ಧಿಪಡಿಸಲು ಉದ್ದೇಶಿಸಲಾಗಿದೆ. 5ನೇ ಹಂತದ ಯೋಜನೆಯ ಅನುಷ್ಠಾನ ಮಾಡುವ ಬಗ್ಗೆ, ಗ್ರಾಮಗಳ ಆಯ್ಕೆ, ಅನುದಾನ ಹಂಚಿಕೆ ಇತ್ಯಾದಿ ವಿಷಯಗಳ ಬಗ್ಗೆ ತೆಗೆದುಕೊಳ್ಳಬೇಕಾದ ಕ್ರಮಗಳ ಕುರಿತು ವಿವರವಾಗಿ ಮೇಲೆ ಓದಲಾದ 1 ಮತ್ತು 2ರ ಸರ್ಕಾರದ ಆದೇಶ ಹಾಗೂ ಸುತ್ತೋಲೆಯನ್ನು ಹೊರಡಿಸಲಾಗಿದೆ. ಅದರನ್ವಯ ನವಲಗುಂದ ತಾಲ್ಲೂಕಿನ ಶಾಸಕರು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಹಾಗೂ ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವರಿಗೆ ಅಳಗವಾಡಿ, ಗುಮ್ಮಗೋಳ, ತಿರ್ಲಾಪುರ ಮತ್ತು ಮಣಕವಾಡ ಗ್ರಾಮಗಳನ್ನು ಆಯ್ಕೆ ಮಾಡಿ ಅನುಮೋದನೆ ಕೊಡಲು ದಿನಾಂಕ:16.07.2012ರಲ್ಲಿ ಪತ್ರ ಬರೆದಿರುತ್ತಾರೆ. ಈ ಗ್ರಾಮಗಳ ಪಟ್ಟಿಗೆ ಸರ್ಕಾರದ ಅನುಮೋದನೆ ನೀಡುವಂತೆ ಮಾನ್ಯ ಮುಖ್ಯಮಂತ್ರಿಗಳ ಪ್ರಧಾನ ಕಾರ್ಯದರ್ಶಿ–II ಸೂಚಿಸಿರುತ್ತಾರೆ.

ಇದನ್ನು ಪರಿಶೀಲಿಸಿ ವರದಿ ನೀಡಲು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಧಾರವಾಡ ಇವರನ್ನು ಕೋರಿದ್ದರ ಮೇರೆಗೆ ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ ಕ್ರಮ ತೆಗೆದುಕೊಳ್ಳಲು ವಿವರಗಳನ್ನು ಧೃಡಪಡಿಸಿ ಕೋರಿ ಕ್ರ.ಸಂ/ಧಾಜಿಪಂ/ಮುಕಾನಿಅ/ಸಿ–1/ಸುಗ್ರಾಯೋ/2012–13, ದಿನಾಂಕ:19.07.2012ರಲ್ಲಿ ಪ್ರಸ್ತಾವನೆ ಸಲ್ಲಿಸಿರುತ್ತಾರೆ. ಸದರಿ ಪ್ರಸ್ತಾವನೆಯನ್ನು ನಿಯಮಗಳನ್ವಯ ಪರಿಶೀಲಿಸಿದ್ದು, ಆಯ್ಕೆ ಪಟ್ಟಿಯನ್ನು ಅಧಿಕೃತವಾಗಿ ಹೊರಡಿಸಲು ಸರ್ಕಾರಿ ಆದೇಶದ ಅಗತ್ಯವಿದೆ. ಅನುಬಂಧದಲ್ಲಿರುವ ಧಾರವಾಡ ಜಿಲ್ಲೆಯ ನವಲಗುಂದ ತಾಲ್ಲೂಕಿನ 4 ಗ್ರಾಮಗಳಲ್ಲಿ ಸುವರ್ಣ ಗ್ರಾಮೋದಯ ಯೋಜನೆಯ 5ನೇ ಹಂತವನ್ನು ಅನುಷ್ಠಾನಗೊಳಿಸಲು ಸರ್ಕಾರ ತೀರ್ಮಾನಿಸಿದೆ. ಪ್ರಯುಕ್ತ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ:54:ಸುಗ್ರಾಯೋ:2012. ಬೆಂಗಳೂರು, ದಿನಾಂಕ:20.07.2012**

ಪ್ರಸ್ತಾವನೆಯಲ್ಲಿ ವಿವರಿಸಿದಂತೆ, ಐದನೇ ಹಂತದ ಸುವರ್ಣ ಗ್ರಾಮೋದಯ ಯೋಜನೆಯಡಿ ಧಾರವಾಡ ಜಿಲ್ಲೆಯ ನವಲಗುಂದ ತಾಲ್ಲೂಕಿನ ಅನುಬಂಧದಲ್ಲಿ ನಮೂದಿಸಿರುವಂತೆ **ಅಳಗವಾಡಿ, ಗುಮ್ಮಗೋಳ, ತಿರ್ಲಾಪುರ ಮತ್ತು ಮಣಕವಾಡ** ಗ್ರಾಮಗಳನ್ನು ಅಭಿವೃದ್ಧಿಗೊಳಿಸಲು ಮಂಜೂರಾತಿ ನೀಡಲಾಗಿದೆ. ಸುವರ್ಣ ಗ್ರಾಮೋದಯ ಯೋಜನೆಯ 5ನೇ ಹಂತವನ್ನು ಅನುಷ್ಠಾನಗೊಳಿಸುವಾಗ ಈ ಕೆಳಕಂಡ ನಿಯಮಗಳನ್ನು ಅನುಸರಿಸಬೇಕಾಗಿರುತ್ತದೆ.

ಪ್ಪ

1. ಉಲ್ಲೇಖಿತ (1)ರ ಸರ್ಕಾರಿ ಆದೇಶದಲ್ಲಿ ಹಾಗೂ ಉಲ್ಲೇಖಿತ (2)ರ ಸುತ್ತೋಲೆಯಲ್ಲಿ ಹೊರಡಿಸಲಾದ ಯೋಜನಾ ಮಾರ್ಗಸೂಚಿ ಪ್ರತಿ ಗ್ರಾಮಕ್ಕೆ ಸಂಬಂಧಿಸಿದಂತೆ ಸಮಗ್ರ ಅಭಿವೃದ್ಧಿ ಯೋಜನೆಯನ್ನು ರೂಪಿಸಿ ಅನುಮೋದನೆ ನೀಡಿ ಕಾರ್ಯಗತಗೊಳಿಸುವುದು.
2. ಈ ಸರ್ಕಾರಿ ಸುತ್ತೋಲೆಯೊಂದಿಗೆ ಲಗತ್ತಿಸಲಾದ ಅನುಬಂಧ-1ರಲ್ಲಿ ಸೂಚಿಸಿದಂತೆ ನವಲಗುಂದ ತಾಲ್ಲೂಕಿಗೆ ನಿಗಧಿಪಡಿಸಿರುವ ಅನುದಾನದ ಮಿತಿಯೊಳಗೆ ಕಾರ್ಯಕ್ರಮವನ್ನು ಕೈಗೊಳ್ಳುವುದು.
3. ಸುತ್ತೋಲೆಯೊಂದಿಗೆ ಲಗತ್ತಿಸಲಾದ ಅನುಬಂಧ-2ರ ವೇಳಾಪಟ್ಟಿಗನುಗುಣವಾಗಿ ಕಾರ್ಯಾನುಷ್ಠಾನ ಮಾಡುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

20/2/12

**(ಬೂವನಹಳ್ಳಿ ನಾಗರಾಜ್)**
ನಿರ್ದೇಶಕರು(ಸು.ಗ್ರಾ) ಹಾಗೂ
ಪದನಿಮಿತ್ತ ಸರ್ಕಾರದ ಉಪಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

ಪ್ರತಿಯನ್ನು:

1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಧಾರವಾಡ.
2. ಮಾನ್ಯ ಜಿಲ್ಲಾ ಉಸ್ತುವಾರಿ ಸಚಿವರು, ಧಾರವಾಡ.
3. ಮಾನ್ಯ ಮುಖ್ಯ ಮಂತ್ರಿಯವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
4. ಮಾನ್ಯ ಉಪ ಮುಖ್ಯ ಮಂತ್ರಿ ಮತ್ತು ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
5. ಮುಖ್ಯ ಲೆಕ್ಕಾಧಿಕಾರಿ ಮತ್ತು ಮುಖ್ಯ ಯೋಜನಾಧಿಕಾರಿ, ಜಿಲ್ಲಾ ಪಂಚಾಯತ್, ಧಾರವಾಡ.
6. ಸಂಕಲನಕಾರರು, ರಾಜ್ಯಪತ್ರ, ಬೆಂಗಳೂರು.
7. ಮಹಾಲೇಖಪಾಲರು, ಬೆಂಗಳೂರು.
8. ಹೆಚ್ಚುವರಿ

## ಅನುಬಂಧ–1

### ನವಲಗುಂದ ತಾಲ್ಲೂಕಿನ 5ನೇ ಹಂತದ ಸುವರ್ಣ ಗ್ರಾಮೋದಯ ಯೋಜನೆಯಡಿ ಅಭಿವೃದ್ಧಿಗೊಳಿಸಿರುವ ಗ್ರಾಮಗಳು

ಜಿಲ್ಲೆ:ಧಾರವಾಡ (ಯೋಜನೆಗೆ ನಿಗದಿಪಡಿಸಿರುವ ಜನಸಂಖ್ಯೆ– 82,815)

| ಕ್ರ.ಸಂ. | ತಾಲ್ಲೂಕು (ನಿಗದಿಪಡಿಸಿರುವ ಜನಸಂಖ್ಯೆ) | ಗ್ರಾಮಗಳ ಹೆಸರು | 2001ರ ಜನಗಣತಿ ಪ್ರಕಾರ ಜನಸಂಖ್ಯೆ | ನಿಗದಿಪಡಿಸಬೇಕಾದ ಅನುದಾನ (ರೂ.ಲಕ್ಷಗಳಲ್ಲಿ |
|---|---|---|---|---|
| 1 | ನವಲಗುಂದ(14,759) | ಅಳಗವಾಡಿ | 5542 | 134.00 |
| 2 | | ಗುಮ್ಮಗೋಳ | 2623 | 63.00 |
| 3 | | ತಿರ್ಲಾಪುರ | 5033 | 121.00 |
| 4 | | ಮಣಕವಾಡ | 2093 | 51.00 |
| | | ಒಟ್ಟು | 15291 | 369.00 |

(ಬೂವನಹಳ್ಳಿ ನಾಗರಾಜ್ )
ನಿರ್ದೇಶಕರು(ಸು.ಗ್ರಾ) ಹಾಗೂ
ಪದನಿಮಿತ್ತ ಸರ್ಕಾರದ ಉಪಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ